<u>ಕರ್ನಾಟಕ ವಿಧಾನ ಪರಿಷತ್ತು</u>

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1449(1722)

2) ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

3) ಉತ್ತರಿಸುವ ದಿನಾಂಕ : 23-03-2020

4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಅರಣ್ಯ ಇಲಾಖೆಯಲ್ಲಿ ಮಾನವ ಮತ್ತು ವನ್ಯಪ್ರಾಣಿ ಸಂಘರ್ಷ (ಬೆಳೆ ಹಾನಿ) ತಪ್ಪಿಸಲು ರೈಲ್ವೆ ಬ್ಯಾರಿಕೇಡ್ ಎಲ್ಲೆಲ್ಲಿ ನಿರ್ಮಿಸಲಾಗುತ್ತಿದೆ;	ರಾಜ್ಯದಲ್ಲಿ ಮಾನವ ಮತ್ತು ವನ್ಯಪ್ರಾಣಿ ಸಂಘರ್ಷ ತಪ್ಪಿಸಲು ಈ ಕೆಳಕಂಡ ವಿಭಾಗಗಳಲ್ಲಿ ಉಪಯೋಗಿತ ರೈಲು ಹಳಿಗಳನ್ನು ಬಳಸಿ ರೈಲ್ವೆ ಬ್ಯಾರಿಕೇಡ್‌ನ್ನು ನಿರ್ಮಿಸಲಾಗಿದೆ. 1 ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ 2 ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ 3 ಮಡಿಕೇರಿ ವಿಭಾಗ 4 ಮಲೈ ಮಹದೇಶ್ವರ ವನ್ಯಜೀವಿ ವಿಭಾಗ 5 ಕಾವೇರಿ ವನ್ಯಜೀವಿ ವಿಭಾಗ 6 ರಾಮನಗರ ವಿಭಾಗ 7 ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ 8 ಹಾಸನ ವಿಭಾಗ
ಆ)	ರಾಜೀವ್‌ಗಾಂಧಿ ನ್ಯಾಷನಲ್ ಪಾರ್ಕ್ (ನಾಗರಹೊಳೆ) ಸುತ್ತಳತೆ ಎಷ್ಟು;	ರಾಜೀವ್‌ಗಾಂಧಿ ರಾಷ್ಟ್ರೀಯ ಉದ್ಯಾನವನದ ಸುತ್ತಳತೆ 259.50 ಕಿ.ಮೀ. ಇರುತ್ತದೆ.
ಇ)	ಇದುವರೆವಿಗೂ ಎಷ್ಟು ಕಿ.ಮೀ. ರೈಲ್ವೆ ಬ್ಯಾರಿಕೇಡ್ ನಿರ್ಮಿಸಲಾಗಿದೆ;	ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಕಾಡಾನೆಗಳ ಹಾವಳಿ ನಿಯಂತ್ರಿಸಲು 114.00 ಕಿ.ಮೀ ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಮಾಡಲು ಪ್ರಸ್ತಾಪಿಸಲಾಗಿದ್ದು, ಇದುವರೆಗೂ 46.198 ಕಿ.ಮೀ. ರೈಲ್ವೆ ಬ್ಯಾರಿಕೇಡ್ ನಿರ್ಮಿಸಲಾಗಿದೆ. ಇನ್ನುಳಿದ 67.80 ಕಿ.ಮೀ ರೈಲ್ವೆ ಬ್ಯಾರಿಕೇಡ್‌ನ್ನು ಮುಂದಿನ ವರ್ಷಗಳಲ್ಲಿ ಅನುದಾನದ ಲಭ್ಯತೆಗೆ ಅನುಗುಣವಾಗಿ ನಿರ್ಮಾಣ ಮಾಡಲಾಗುವುದು.
ಈ)	ಇನ್ನೂ ಎಷ್ಟು ಕಿ.ಮೀ. ಪ್ರದೇಶದಲ್ಲಿ ಬ್ಯಾರಿಕೇಡ್ ನಿರ್ಮಿಸಬೇಕಾಗಿದೆ;	
ಉ)	ಯಾವ ಕಾಲಮಿತಿಯಲ್ಲಿ ನಿರ್ಮಿಸಲಾಗುವುದು ?	

ಸಂಖ್ಯೆ: ಅಪಜೀ 35 ಎಫ್‌ಟಿಎಸ್ 2020

21/03/2020

(ಆನಂದ್ ಸಿಂಗ್)

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು